ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

641 (911) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ನವೆಂಬರ್ ತಿಂಗಳಿನಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳನ್ನು ನಡೆಸಲು 2006ರಲ್ಲಿ ಸುತ್ತೋಲೆ ಹೊರಡಿಸಲಾಗಿದ್ದು, ಪಟ್ಟಣ ಪ್ರದೇಶ ಮಕ್ಕಳ ಸಮಸ್ಯೆಗಳನ್ನು ಆಲಿಸುವ ಕುರಿತು ಸರ್ಕಾರದ ಕ್ರಮವೇನು ;

(ಆ) ಮಕ್ಕಳ ಗ್ರಾಮ ಸಭೆಗಳು ಕೇವಲ ಗ್ರಾಮೀಣ ಭಾಗಕ್ಕೆ ಮಾತ್ರ ಸೀಮಿತವಾಗಿದ್ದು, ನಗರವನ್ನು ಮಕ್ಕಳ ಸ್ನೇಹಿ ಮಾಡಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಗರ ಪ್ರದೇಶಗಳ ಪ್ರತಿ ವಾರ್ಡ್‌ಗಳಲ್ಲಿ ಇರುವ ಮಕ್ಕಳ ಸಂಖ್ಯೆಗಳ ಅಂಕಿ ಅಂಶ ಸರ್ಕಾರದ ಬಳಿ ಇದೆಯೇ ; ತಿಂಗಳಲ್ಲಿ ಒಂದು ದಿನದ ಮಟ್ಟಿಗೆ ಮಕ್ಕಳ ವಾರ್ಡ್ ಸಭೆಗಳನ್ನು ನಡೆಸುವ ಬಗ್ಗೆ ಸರ್ಕಾರದ ನಿಲುವೇನು ?